**MARCH 12, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **2 ಸಾವಿರ ಕೋಟಿ** ಅಂದಾಜು ಮೊತ್ತದಲ್ಲಿ ಸೇತುವೆಗಳ ಪುನರ್ ನಿರ್ಮಾಣ, ಪುನಶ್ಚೇತನ, ಕಾಲುಸಂಕ ಕಾಮಗಾರಿಗಳಿಗೆ ತಾತ್ವಿಕ ಅನುಮೋದನೆ–ಲೋಕೋಪಯೋಗಿ ಸಚಿವರ ಹೇಳಿಕೆ.

- **ಬಯಲುಸೀಮೆ ಜಿಲ್ಲೆಗಳ** ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸರ್ಕಾರ ಬದ್ಧ: 2027ರ ವೇಳೆಗೆ ಎತ್ತಿನಹೊಳೆ ಯೋಜನೆ ಪೂರ್ಣ – ಸಚಿವ ಪ್ರಿಯಾಂಕ ಖರ್ಗೆ

- **ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ** ಒಟ್ಟು 2129 ಕಂಪೆನಿಗಳಿಂದ ಸುಮಾರು 2.50 ಲಕ್ಷ ಉದ್ಯೋಗಾವಕಾಶ– ಐಟಿ, ಬಿಟಿ ಸಚಿವರಿಂದ ಮಾಹಿತಿ.

- **ಪ್ರತಿ ಕುಟುಂಬಕ್ಕೆ ತಿಂಗಳಿಗೆ** ಒಂದು ಸಿಲಿಂಡರ್ ಪೂರೈಕೆ: ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ–ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಸಚಿವರ ಸ್ಪಷ್ಟನೆ.

**ಈಗ ವಾರ್ತೆಗಳ ವಿವರ**

***********

**2 ಸಾವಿರ ಕೋಟಿ ಅಂದಾಜು ಮೊತ್ತದಲ್ಲಿ** ರಸ್ತೆಗಳ ಮೇಲಿರುವ ಸೇತುವೆಗಳ ಪುನರ್ ನಿರ್ಮಾಣ, ಪುನಶ್ಚೇತನ ಹಾಗೂ ಕಾಲುಸಂಕ ಕಾಮಗಾರಿಗಳಿಗೆ ತಾತ್ವಿಕ ಅನುಮೋದನೆ ನೀಡಲಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ತಿಳಿಸಿದ್ದಾರೆ. ವಿಧಾನಪರಿಷತ್‌ನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಕರಾವಳಿ ಭಾಗದಲ್ಲಿ ಲೋಕೋಪಯೋಗಿ ಇಲಾಖೆಯ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಲಘುವಾಹನ ಸಂಚಾರಕ್ಕೆ ಮಾತ್ರ ಯೋಗ್ಯವಾಗಿರುವ 15 ಸೇತುವೆಗಳನ್ನು ಗುರುತಿಸಲಾಗಿದೆ. ಸೇತುವೆಗಳ ಪುನರ್ ನಿರ್ಮಾಣ ಹಾಗೂ ಪುನಶ್ಚೇತನಕ್ಕಾಗಿ 561.12 ಕೋಟಿ ಅಂದಾಜು ಮೊತ್ತದ 28 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ. 129 ಕೋಟಿ ಅಂದಾಜು ಮೊತ್ತದ 4 ಕಾಲುಸಂಕ ಹಾಗೂ 3 ಸೇತುವೆ ಪುನರ್ ಕಾಮಗಾರಿಗಳ ಪ್ರಸ್ತಾವನೆ ಅನುಮೋದನೆ ಹಂತದಲ್ಲಿವೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.

***********

**ಬಯಲುಸೀಮೆ ಜಿಲ್ಲೆಗಳ** ಜೊತೆಗೆ ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಗಳನ್ನೊಳಗೊಂಡ ಎತ್ತಿನಹೊಳೆ ಯೋಜನೆ 2027 ರ ವೇಳೆಗೆ ಪೂರ್ಣಗೊಳ್ಳಲಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಪರಿಷತ್ತಿನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಯೋಜ**ನೆಯ** ಮೂಲಕ ಒಟ್ಟು 24.01 ಟಿ.ಎಂ.ಸಿ ನೀರನ್ನು ಹಂಚಿಕೆ ಮಾಡಲಾಗಿದೆ. ಇದರಲ್ಲಿ, ಗ್ರಾಮೀಣ ಜನವಸತಿಗಳ ಕುಡಿಯುವ ನೀರಿಗಾಗಿ 8.393 ಟಿ.ಎಂ.ಸಿ ನೀರನ್ನು ಮೀಸಲಿಡಲಾಗಿದೆ. ಈ ಯೋಜನೆಯನ್ನು ವಿಶ್ವೇಶ್ವರಯ್ಯ ಜಲ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು. ರಾಜ್ಯದ ಬಯಲುಸೀಮೆ ಜಿಲ್ಲೆಗಳಾದ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆ ಶಾಶ್ವತ ಪರಿಹಾರಕ್ಕಾಗಿ ಸರ್ಕಾರ ಯುದ್ಧೋಪಾದಿಯಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಸಚಿವರು ಹೇಳಿದರು.

***********

**ರಾಜ್ಯದಲ್ಲಿ ಪಶುವೈದ್ಯಾಧಿಕಾರಿಗಳ** ಕೊರತೆ ನೀಗಿಸಲು 400 ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಪಶುಸಂಗೋಪನಾ ಇಲಾಖೆ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ವಿಧಾನಪರಿ ತ್‌ನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗದಿಂದ ಪರೀಕ್ಷೆಗಳು ನಡೆದಿದ್ದು, ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. 400 ಪಶುವೈದ್ಯಾಧಿಕಾರಿಗಳ ಹುದ್ದೆಗಳಲ್ಲಿ 54 ಹುದ್ದೆಗಳನ್ನು ಕಲ್ಯಾಣ ಕರ್ನಾಟಕದಲ್ಲಿ ಖಾಲಿ ಇರುವ ಸ್ಥಳಗಳಿಗೆ ಭರ್ತಿ ಮಾಡಲಾಗುವುದು ಎಂದರು. ಈಗಾಗಲೇ 2024–25 ನೇ ಸಾಲಿನಲ್ಲಿ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿದ್ದು, ಪ್ರಸ್ತುತ 367 ಪಶುವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಹೆಚ್ಚುವರಿಯಾಗಿ 400 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ ಎಂದು ಸಚಿವರು ತಿಳಿಸಿದರು.

***********

**ಕಳೆದ 3 ವ ಗಳಲ್ಲಿ ರಾಜ್ಯದಲ್ಲಿ** ಒಟ್ಟು 2129 ಕಂಪೆನಿ, ಸ್ಟಾರ್ಟ್ ಅಪ್ ಕಂಪೆನಿಗಳು ಆರಂಭಗೊಂಡಿದ್ದು, ಸುಮಾರು 2.50 ಲಕ್ಷ ಉದ್ಯೋಗಾವಕಾಶ ದೊರಕಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ವೇದವ್ಯಾಸ್ ಕಾಮತ್ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಳೆದ 3 ವ ಗಳಲ್ಲಿ ಐಟಿ ವಲಯಕ್ಕೆ ಸಂಬಂಧಿಸಿದಂತೆ 5, ಬಿಟಿ ವಲಯಕ್ಕೆ ಸಂಬಂಧಿಸಿದಂತೆ ಸುಮಾರು 13 ಹಾಗೂ ಸ್ಟಾರ್ಟ್ ಆಪ್ ವಲಯದಲ್ಲಿ ಸುಮಾರು 475 ನವೋದ್ಯಮಗಳಿಗೆ ತ್ರಿಪಕ್ಷೀಯ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದರು. ರಾಜೀವ್ ಗಾಂಧಿ ಉದ್ಯಮಶೀಲತೆಯಡಿ ಒಟ್ಟು 60 ನಾವೀನ್ಯಕಾರರೊಂದಿಗೆ ತ್ರಿಪಕ್ಷೀಯ ಕರಾರು ಒಪ್ಪಂದ ಹಾಗೂ ಮಹಿಳಾ ಉದ್ಯಮಶೀಲತೆಗೆ ಸಂಬಂಧಿಸಿದಂತೆ 4 ಸಂಸ್ಥೆಗಳೊಂದಿಗೆ ದ್ವಿಪಕ್ಷೀಯ ಒಪ್ಪಂದ ಹಾಗೂ ಗ್ರಾಸ್ ರೂಟ್ ಇನ್ನೋವೇಶನ್ ಕಾರ್ಯಕ್ರಮದಡಿ 27 ನವೋದ್ಯಮಗಳಿಗೆ ತ್ರಿಪಕ್ಷೀಯ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

***********

**ಪ್ರತಿ ಕುಟುಂಬಕ್ಕೆ ತಿಂಗಳಿಗೆ** ಒಂದು ಸಿಲಿಂಡರ್ ಪೂರೈಸಲಾಗುವುದು. ಸಾರ್ವಜನಿಕರು ಆತಂಕ ಪಡಬೇಕಿಲ್ಲ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಕುಣಿಗಲ್ ಶಾಸಕ ಡಾ. ರಂಗನಾಥ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಈ ಕುರಿತು ತೈಲ ಕಂಪೆನಿಗಳ ಜೊತೆ ಸಭೆ ನಡೆಸಿ, ಚರ್ಚಿಸಲಾಗಿದೆ. ಪ್ರತಿ ಕುಟುಂಬಕ್ಕೆ ತಿಂಗಳಿಗೆ ಒಂದು ಸಿಲಿಂಡರ್ ಪೂರೈಸಲು ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಲಾಗುವುದು ಎಂದು ಕಂಪೆನಿಗಳು ಭರವಸೆ ನೀಡಿವೆ ಎಂದರು. ಮಧ್ಯಪ್ರಾಚ್ಯ ದೇಶಗಳಲ್ಲಿ ಯುದ್ಧ ನಡೆಯುತ್ತಿರುವುದರಿಂದ ಹಡಗುಗಳು ರದ್ದಾಗಿವೆ. ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹ ಸಹಕರಿಸಬೇಕು ಎಂದು ಸಚಿವರು ಮನವಿ ಮಾಡಿದರು.

*******

**ಹುಬ್ಬಳ್ಳಿಯ ಉಣಕಲ್‌ನಲ್ಲಿರುವ** ಐತಿಹಾಸಿಕ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗೆ 25 ಕೋಟಿ ರೂಪಾಯಿಗಳ ಯೋಜನೆ ಸಿದ್ಧಪಡಿಸಲಾಗಿದೆ ಎಂದು ಧಾರ್ಮಿಕ ದತ್ತಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನಪರಿ ತ್‌ನಲ್ಲಿ ಸದಸ್ಯ ಪ್ರದೀಪ ಶೆಟ್ಟರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಯೋಜನೆಯ ಆಡಳಿತಾತ್ಮಕ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. ದೇವಾಲಯಕ್ಕೆ ಅಗತ್ಯವಿರುವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸ್ಥಳವಕಾಶದ ಕೊರತೆ ಇರುವುದರಿಂದ, ಅಗತ್ಯವಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಕೊಂಕಣ ರೇಲ್ವೆ ವಲಯದಲ್ಲಿ** ಜೋಡಿ ಮಾರ್ಗ ನಿರ್ಮಾಣ, ರೈಲು ಹಳಿ ಬಲಪಡಿಸುವುದು ಸೇರಿದಂತೆ, ಒಟ್ಟು ಸಾಮರ್ಥ್ಯ ಬಲವರ್ಧನೆಗೆ ವಿಸ್ತೃತ ಯೋಜನಾ ವರದಿ ರೂಪಿಸಲಾಗುತ್ತಿದೆ ಎಂದು, ರೇಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಕರ್ನಾಟಕ, ಮಹಾರಾಷ್ಟ್ರ, ಗೋವಾ ಮತ್ತು ಕೇರಳ ರಾಜ್ಯಗಳು, ಕೊಂಕಣ ರೇಲ್ವೆ ವಲಯದ ಭಾಗೀದಾರರಾಗಿದ್ದು, ತಮ್ಮ ಪಾಲಿನ ಅಗತ್ಯ ಕೊಡುಗೆ ನೀಡಬೇಕಿದೆ. ರೈಲು ಮಾರ್ಗದಲ್ಲಿ ವನ್ಯ ಮೃಗ ಸಂಘರ್ಷ ತಪ್ಪಿಸಲು, ಕೆಳ ಸೇತುವೆ, ಮೇಲ್ಸೇತುವೆ ನಿರ್ಮಾಣದ ಜೊತೆಗೆ, ಆಪ್ಟಿಕಲ್ ಫೈಬರ್ ಕೇಬಲ್ ಹಾಗೂ ಎಐ ಕ್ಯಾಮೆರಾ ಆಧಾರಿತ ಎರಡು ಅತ್ಯಾಧುನಿಕ ತಂತ್ರಜ್ಞಾನ ಬಳಸಲಾಗುತ್ತಿದೆ ಎಂದರು. ರೈಲು ಅಪಘಾತ ತಪ್ಪಿಸುವ ಕವಚ್, ಅತ್ಯಾಧುನಿಕ ತಂತ್ರಜ್ಞಾನವಾಗಿದ್ದು, 2016 ರಲ್ಲಿ ಯೋಜನೆ ಆರಂಭಿಸಲಾಯಿತು. ಕವಚ್ ತಂತ್ರಜ್ಞಾನದಲ್ಲಿ 5 ಭಾಗಗಳಿದ್ದು, ಆಪ್ಟಿಕಲ್ ಫೈಬರ್ ಕೇಬಲ್ ಅಳವಡಿಕೆ ಆರಂಭಿಕ ಹಂತವಾಗಿದೆ. ಈಗಾಗಲೇ 8 ಸಾವಿರದ 570 ಕಿಲೋ ಮೀಟರ್ ಮಾರ್ಗದಲ್ಲಿ ಇದನ್ನು ಅಳವಡಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

*******

**ಗರ್ಭಕಂಠದ ಕ್ಯಾನ್ಸರ್ ತಡೆಯುವ** ನಿಟ್ಟಿನಲ್ಲಿ 14 ವ ರ್ಷದೊಳಗಿನ ಹೆಣ್ಣುಮಕ್ಕಳಿಗೆ ಮೂರು ತಿಂಗಳ ಕಾಲ ಹೂಮನ್ ಪ್ಯಾಪಿಲೋಮ ಲಸಿಕೆ ನೀಡುವ ವಿಶೇ ಷ ಅಭಿಯಾನ ನಿನ್ನೆಯಿಂದ ರಾಜ್ಯದಲ್ಲಿ ಆರಂಭಗೊಂಡಿದ್ದು, ಮೂರು ತಿಂಗಳ ಕಾಲ ನಡೆಯಲಿದೆ. ಬಳ್ಳಾರಿಯಲ್ಲಿ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅಭಿಯಾನಕ್ಕೆ ಚಾಲನೆ ನೀಡಿದರು. ಅಭಿಯಾನದ ಮಹತ್ವ ಕುರಿತು ಭಾರತೀಯ ಕುಟುಂಬ ಯೋಜನಾ ಸಂಘದ ವ್ಯವಸ್ಥಾಪಕಿ ಡಾ.ಜಯಲಕ್ಷ್ಮಿ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡರು.

**ಧ್ವನಿ–ಡಾ.ಜಯಲಕ್ಷ್ಮಿ– 28 ಸೆಕೆಂಡ್ಸ್**

*******

**ಸಾರ್ವಜನಿಕರಿಗೆ ಪೂರೈಸುವ ಕುಡಿಯುವ** ನೀರಿನ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು. ಶುದ್ಧ, ಸುರಕ್ಷಿತ, ಮತ್ತು ರಾಸಾಯನಿಕ–ಮುಕ್ತ ನೀರು ಪೂರೈಕೆ ಖಚಿತಪಡಿಸಿಕೊಳ್ಳುವುದು ಅಗತ್ಯ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಸೂಚಿಸಿದ್ದಾರೆ. ಮಂಡ್ಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಕುಡಿಯುವ ನೀರಿನ ಪೈಪ್ ಲೈನ್ ಸಾಗುವ ಮಾರ್ಗದಲ್ಲಿ ಒಳಚರಂಡಿ ನೀರು ಸೋರಿಕೆಯಾಗದಂತೆ ಮತ್ತು ಮಿಶ್ರಣವಾಗದಂತೆ ನೋಡಿಕೊಳ್ಳುವುದು ಸ್ಥಳೀಯ ಸಂಸ್ಥೆಗಳ ಜವಾಬ್ದಾರಿ ಎಂದರು. ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಸರ್ಕಾರದ ವಿವಿಧ ಯೋಜನೆಗಳಡಿ ನೀಡಿರುವ ಅನುದಾನವನ್ನು ನಗರ ಸ್ಥಳೀಯ ಸಂಸ್ಥೆಗಳು ಸಮರ್ಪಕವಾಗಿ ಬಳಸಿಕೊಂಡು ಪ್ರತಿಶತ ನೂರರ ಷ್ಟು ಅನು ಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**2 ಸಾವಿರ ಕೋಟಿ** ಅಂದಾಜು ಮೊತ್ತದಲ್ಲಿ ಸೇತುವೆಗಳ ಪುನರ್ ನಿರ್ಮಾಣ, ಪುನಶ್ಚೇತನ, ಕಾಲುಸಂಕ ಕಾಮಗಾರಿಗಳಿಗೆ ತಾತ್ವಿಕ ಅನುಮೋದನೆ–ಲೋಕೋಪಯೋಗಿ ಸಚಿವರ ಹೇಳಿಕೆ.

**ಬಯಲುಸೀಮೆ ಜಿಲ್ಲೆಗಳ** ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸರ್ಕಾರ ಬದ್ಧ: 2027ರ ವೇಳೆಗೆ ಎತ್ತಿನಹೊಳೆ ಯೋಜನೆ ಪೂರ್ಣ – ಸಚಿವ ಪ್ರಿಯಾಂಕ ಖರ್ಗೆ

**ಕಳೆದ 3 ವ ರ್ಷಗಳಲ್ಲಿ ರಾಜ್ಯದಲ್ಲಿ** ಒಟ್ಟು 2129 ಕಂಪೆನಿಗಳಿಂದ ಸುಮಾರು 2.50 ಲಕ್ಷ ಉದ್ಯೋಗಾವಕಾಶ– ಐಟಿ, ಬಿಟಿ ಸಚಿವರಿಂದ ಮಾಹಿತಿ.

**ಪ್ರತಿ ಕುಟುಂಬಕ್ಕೆ ತಿಂಗಳಿಗೆ** ಒಂದು ಸಿಲಿಂಡರ್ ಪೂರೈಕೆ: ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ–ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಸಚಿವರ ಸ್ಪಷ್ಟನೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********